## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ | : | **45** |
| ಸದಸ್ಯರ ಹೆಸರು | : | ಶ್ರೀ. ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 07.12.2020 |
| ಉತ್ತರಿಸುವ ಸಚಿವರು | : | ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಹಾಗೂ ಸಕಾಲ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ. | ಬೆಂಗಳೂರು ಮತ್ತು ಮೈಸೂರು ವಿಭಾಗದಲ್ಲಿ ಪ್ರೌಢಶಾಲಾ ಸಹ ಶಿಕ್ಷಕರಿಂದ ಮುಖ್ಯೋಪಾಧ್ಯಾಯರ/ತತ್ಸಮಾನ ಹುದ್ದೆಗಳಿಗೆ ಬಡ್ತಿ ನೀಡುವಲ್ಲಿ ಶೇಕಡ 75 ರಷ್ಟು ಬಡ್ತಿ ಹಾಗೂ ಶೇಕಡ 25 ರಷ್ಟು ನೇರ ನೇಮಕಾತಿ ನಿಯಮ ಪಾಲನೆ ಆಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಸರ್ಕಾರದ ಆದೇಶ ಸಂಖ್ಯೆ: ಇಡಿ 51 ಡಿಜಿಓ 2005, ದಿನಾಂಕ:30/06/2006ರಂತೆ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರು/ತತ್ಸಮಾನ ವೃಂದದ ಲಭ್ಯ ಖಾಲಿ ಹುದ್ದೆಗಳಿಗೆ ನೇರ ನೇಮಕಾತಿ ಮೂಲಕ ಶೇಕಡ.25% ರಷ್ಟು ಮತ್ತು ಪ್ರೌಢಶಾಲಾ ಸಹ ಶಿಕ್ಷಕರು/ತತ್ಸಮಾನ ವೃಂದದ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರಿಂದ ಸೇವಾ ಜೇಷ್ಠತಾ ಆಧಾರದಲ್ಲಿ ಮುಂಬಡ್ತಿಯನ್ನು ನೀಡುವ ಮೂಲಕ ಶೇಕಡ.75% ರಷ್ಟು ಹುದ್ದೆಗಳನ್ನು ಭರ್ತಿ ಮಾಡಲು ಕ್ರಮವಹಿಸಲಾಗಿದೆ.<br>ಮುಂದುವರೆದು ಮೇಲಿನಂತೆ ಕ್ರಮವನ್ನು ಅನುಸರಿಸಿ ಪ್ರಸ್ತುತ 2020-21ನೇ ಸಾಲಿನಲ್ಲಿ ಬೆಂಗಳೂರು ಮತ್ತು ಮೈಸೂರು ವಿಭಾಗದ 739 ಪ್ರೌಢಶಾಲಾ ಸಹ ಶಿಕ್ಷಕರು/ತತ್ಸಮಾನ ವೃಂದದ ಹುದ್ದೆಗಳಲ್ಲಿ ಕಾರ್ಯ ನಿರ್ವಹಿಸುತ್ತಿರುವ ಶಿಕ್ಷಕರುಗಳನ್ನು ಸೇವಾ ಜೇಷ್ಠತೆಯನ್ನು ಆಧರಿಸಿ ಮುಂಬಡ್ತಿಯ ಮೂಲಕ ಸರ್ಕಾರಿ ಪ್ರೌಢಶಾಲಾ ಮುಖ್ಯ ಶಿಕ್ಷಕರು/ತತ್ಸಮಾನ ವೃಂದದ ಲಭ್ಯ ಖಾಲಿ ಹುದ್ದೆಗಳಿಗೆ ಶೇಕಡ 75ರ ಅನುಪಾತದಲ್ಲಿ ಭರ್ತಿ ಮಾಡಲು ಕ್ರಮವಹಿಸಲಾಗಿದೆ. |
| ಆ. | ಹಾಗಿದ್ದಲ್ಲಿ, ಪಾಲನೆ ಆಗದಿರುವುದಕ್ಕೆ ಕಾರಣಗಳೇನು; (ವಿವರಗಳನ್ನು ಒದಗಿಸುವುದು) | ಪ್ರಶ್ನೆ ಉದ್ಭವಿಸುವುದಿಲ್ಲ. |
| ಇ. | ನಿಯಮಾನುಸಾರ ಯಾವ ಕಾಲಮಿತಿಯಲ್ಲಿ ಸದರಿ ಸಮಸ್ಯೆಯನ್ನು ಪರಿಹರಿಸಲಾಗುವುದು? | |

ಸಂಖ್ಯೆ: ಇಪಿ 191 ಎಸ್‌ಓಹೆಚ್ 2020

S. Su

(ಎಸ್. ಸುರೇಶ್ ಕುಮಾರ್)
ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಹಾಗೂ ಸಕಾಲ ಸಚಿವರು

1